# ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:100/40:ಆರ್‌ಆರ್‌ಸಿ:2013.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:14-11-2013.

## ಸುತ್ತೋಲೆ

ವಿಷಯ — ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂ.ರಾಜ್ ಸಂಸ್ಥೆಗಳ ಸಮಿತಿಯ 2ನೇ ವರದಿಯಲ್ಲಿನ (2007-08ನೇ ಸಾಲಿನ ಸಿ & ಎಜಿ ವರದಿಯಲ್ಲಿನ) ಶಿಫಾರಸ್ಸುಗಳ ಮೇಲೆ ಅನುಪಾಲನಾ ಕ್ರಮ ಕೈಗೊಳ್ಳುವ ಕುರಿತು- ಕಂಡಿಕೆ ಸಂಖ್ಯೆ:2.8- ರಸ್ತೆ ಕಾಮಗಾರಿಗಳ ಮೇಲೆ ತಪ್ಪಿಸಬಹುದಾಗಿದ್ದ ಹೆಚ್ಚುವರಿ ಹೊಣೆಗಾರಿಕೆ.

ಉಲ್ಲೇಖ — ಸ್ಥಳೀಯ ಸಂಸ್ಥೆಗಳ ಮತ್ತು ಪಂ.ರಾಜ್ ಸಂಸ್ಥೆಗಳ ಸಮಿತಿಯ ವರದಿ ಹಾಗೂ ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಅನಧಿಕೃತ ಟಿಪ್ಪಣಿ ಸಂಖ್ಯೆ:ಗ್ರಾಅಪ:42:ಎಯುಡಿ:2013, ದಿನಾಂಕ: 3-8-2013.

ಸ್ಥಳೀಯ ಸಂಸ್ಥೆಗಳ ಮತ್ತು ಪಂ.ರಾಜ್ ಸಂಸ್ಥೆಗಳ ಸಮಿತಿಯ 2ನೇ ವರದಿಯಲ್ಲಿನ 2007-08ನೇ ಸಾಲಿನ ಸಿ & ಎಜಿ ಲೆಕ್ಕಪರಿಶೋಧನಾ ವರದಿಯ ಕಂಡಿಕೆ:2.8ರಲ್ಲಿ ರಸ್ತೆ ಕಾಮಗಾರಿಗಳ ಮೇಲೆ ತಪ್ಪಿಸಬಹುದಾಗಿದ್ದ ಹೆಚ್ಚುವರಿ ಹೊಣೆಗಾರಿಕೆ ಕುರಿತಾದ ಆಕ್ಷೇಪಣೆಯು ಚಾಮರಾಜನಗರ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಪಿಎಂಜಿಎಸ್‌ವೈ ಕಾಮಗಾರಿಯ ಟೆಂಡರ್ ಪ್ರಕ್ರಿಯೆ, ಅನುಸರಿಸಿದ ಕಾರ್ಯ ವಿಧಾನ, ಸ್ಟಾಂಡರ್ಡ್ ಬಿಡ್ಡಿಂಗ್ ದಾಖಲೆಯ ಷರತ್ತು, ಕಾಮಗಾರಿ ಅನುಮೋದನೆ, ಮುಂಗಡ ಠೇವಣಿ/ಭದ್ರತಾ ಠೇವಣಿ ಮತ್ತು ಟೆಂಡರ್ ಕರಾರಿನಲ್ಲಿನ ಪಾಲನೆ ಹಾಗೂ ಅನುಸರಿಸಬೇಕಾದ ಇತರ ಕ್ರಮಗಳ ಬಗ್ಗೆ ಪ್ರಸ್ತಾವಿಸಲಾಗಿದೆ. ಸದರಿ ಆಡಿಟ್ ಆಕ್ಷೇಪಣೆಗೆ ಈ ಹಿಂದೆ ಇಲಾಖೆಯು ನೀಡಿದ ಉತ್ತರಗಳನ್ನು ಸಮಿತಿಯು ವಿಶ್ಲೇಷಿಸಿ, ಸಂಬಂಧಿಸಿದ ಲೋಪಕ್ಕೆ ಕಾರಣಕರ್ತರಾದವರ ಮೇಲೆ ಶಿಸ್ತಿನ ಕ್ರಮ ಜರುಗಿಸುವಂತೆ 3 ಅಂಶಗಳನ್ನು ಶಿಫಾರಸ್ಸು ಮಾಡಿದ್ದು, ಇದರಲ್ಲಿ ಇನ್ನು ಮುಂದೆ ಇಂತಹ ಲೋಪವನ್ನು ತಪ್ಪಿಸಲು ಕೆಳಕಂಡ ಅಂಶದ ಮೇಲೆ ಅನುಪಾಲನಾ ಕ್ರಮ ಕೈಗೊಳ್ಳುವಂತೆ ಸೂಚಿಸಿರುತ್ತದೆ.

> "ಇನ್ನು ಮುಂದೆ ಯಾವುದೇ ಕಾಮಗಾರಿಯನ್ನು ಪ್ರಾರಂಭಿಸುವ ಮುನ್ನ ಸಂಬಂಧಪಟ್ಟ ಅಧಿಕಾರಿಗಳು ನಿಗದಿತ ಟೆಂಡರ್ ಕಾರ್ಯ ವಿಧಾನವನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದು ಹಾಗೂ ಒಂದು ವೇಳೆ ಪಾಲಿಸದಿದ್ದಲ್ಲಿ ಲೋಪಕ್ಕೆ ಕಾರಣರಾಗುವ ಅಧಿಕಾರಿಗಳ ವಿರುದ್ಧ ಶಿಸ್ತಿನ ಕ್ರಮ ಜರುಗಿಸಲಾಗುವುದೆಂದು ಸೂಚನೆ ನೀಡಬೇಕೆಂದು ಸಮಿತಿಯು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತದೆ".

ಅದರಂತೆ ರಸ್ತೆ ಕಾಮಗಾರಿಗಳ ಅನುಷ್ಠಾನದಲ್ಲಿ ನಿಗದಿತ ಟೆಂಡರ್ ಕಾರ್ಯ ವಿಧಾನವನ್ನು ಹಾಗೂ ನಿಯಮಾನುಸಾರ ಕಾಲಕಾಲಕ್ಕೆ ನೀಡಲಾಗುವ ಆದೇಶಗಳನ್ನು ತಪ್ಪದೆ

ಅನುಸರಿಸತಕ್ಕದ್ದೆಂದು ಈ ಮೂಲಕ ಎಲ್ಲಾ ಅನುಷ್ಠಾನಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಒಂದು ವೇಳೆ ನಿಗದಿತ ಟೆಂಡರ್ ಕಾರ್ಯ ವಿಧಾನದ ಅನುಸರಣೆಯಲ್ಲಿ ಯಾವುದೇ ಲೋಪಕ್ಕೆ ಕಾರಣರಾಗುವ ಅಧಿಕಾರಿಗಳ ವಿರುದ್ಧ ಶಿಸ್ತಿನ ಕ್ರಮ ಜರುಗಿಸಲಾಗುವುದೆಂಬ ಅಂಶವನ್ನು ಸಹ ಗಮನದಲ್ಲಿರಿಸಿಕೊಳ್ಳತಕ್ಕದ್ದು.

18/11/13

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,ಬೆಂಗಳೂರು.
3. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಪಂಚಾಯತ್ ರಾಜ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿ ಕಟ್ಟಡ, ಬೆಂಗಳೂರು-20.
6. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಕರ್ನಾಟಕ ನಿರ್ಮಾಣ ಭವನ, ಡಾ: ರಾಜ್‌ಕುಮಾರ್ ರಸ್ತೆ, ಯಶವಂತಪುರ, ಬೆಂಗಳೂರು.
7. ಎಲ್ಲಾ ಪಿಎಂಜಿಎಸ್‌ವೈ ಯೋಜನಾ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳಿಗೆ.
8. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
9. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
10. ಎಲ್ಲಾ ಪಂಚಾಯತ್ ರಾಜ್ ಇಂಜಿನಿರಿಂಗ್ ವೃತ್ತಗಳ ಅಧೀಕ್ಷಕ ಇಂಜಿನಿಯರುಗಳಿಗೆ.
11. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳಿಗೆ.
12. ಮಾಹಿತಿ ಕೇಂದ್ರಕ್ಕೆ (10 ಪ್ರತಿಗಳು).
13. ರಕ್ಷಾ ಕಡತ / ಹೆಚ್ಚುವರಿ ಪ್ರತಿ.